ಶ್ರೀಮತಿ ಲೀಲಾದೇವಿ ಪ್ರಸಾದ್ (ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು):

ಅ) ಹೌದು

ಆ) ಸೋಮನಾಥಪುರ ಶ್ರೀ ಚೆನ್ನಕೇಶವ ದೇವಸ್ಥಾನಕ್ಕೆ ಹೋಗುವ ರಸ್ತೆಯನ್ನು 5.00 ಲಕ್ಷ ರೂ. ಗಳ ವೆಚ್ಚದಲ್ಲಿ ಅಭಿವೃದ್ಧಿ ಪಡಿಸಲಾಗಿದೆ.

1996-97 ನೇ ಸಾಲಿನಲ್ಲಿ ರಸ್ತೆ ಅಭಿವೃದ್ಧಿಗಾಗಿ 75.00ಲಕ್ಷ ರೂ. ಗಳನ್ನು ಬಿಡುಗಡೆ ಮಾಡಲಾಗಿದೆ. 1997-98ರಲ್ಲಿ 19.97 ಲಕ್ಷ ಹಣ ಬಿಡುಗಡೆ ಮಾಡಿದೆ.

1998-99 ನೇ ಸಾಲಿನಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ರಸ್ತೆ ಅಭಿವೃದ್ಧಿಗೆ ಹಣ ಒದಗಿಸುವ ಪ್ರಸ್ತಾವನೆ ಇರುವುದಿಲ್ಲ. ಸಂಬಂಧಪಟ್ಟ ಇಲಾಖೆಗಳಾದ ಅಂದರೆ ಲೋಕೋಪಯೋಗಿ ಇಲಾಖೆ, ಜಿಲ್ಲಾ ಪಂಚಾಯತ್‌ಗಳ ಮೂಲಕ ಪ್ರವಾಸಿ ಸ್ಥಳಗಳಿಗೆ ಹೋಗುವ ಕೂಡ ರಸ್ತೆಗಳನ್ನು ಹಂತ ಹಂತವಾಗಿ ಅಭಿವೃದ್ಧಿ ಪಡಿಸಲು ಕ್ರಮ ಕೈಗೊಳ್ಳಲಾಗುವುದು.

ಟಿ. ನರಸೀಪುರ ಸಿವಿಲ್ ಕೋರ್ಟ್ ಸ್ಥಾಪನೆ

178 (236) ಶ್ರೀ ಎಸ್. ಕೃಷ್ಣಪ್ಪ (ಬನ್ನೂರು) : ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ವಾರ್ತಾ, ಮತ್ತು ಪ್ರಚಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ

ಅ) ಟಿ. ನರಸೀಪುರಕ್ಕೆ ಸಿವಿಲ್ ಕೋರ್ಟ್ ಮಂಜೂರು ಮಾಡುವ ವಿಚಾರ ಸರ್ಕಾರದ ಪರಿಶೀಲನೆಯಲ್ಲಿದೆಯೇ?

ಆ) ಹಾಗಿದ್ದಲ್ಲಿ ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಎಂ.ಸಿ. ನಾಣಯ್ಯ (ಕಾನೂನು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ವಾರ್ತಾ ಮತ್ತು ಪ್ರಚಾರ ಸಚಿವರು) :

ಅ) ಟಿ. ನರಸೀಪುರದಲ್ಲಿ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ (ಹಿರಿಯ ಶ್ರೇಣಿ) ಸ್ಥಾಪಿಸುವ ವಿಚಾರವು ಕರ್ನಾಟಕ ಉಚ್ಚ ನ್ಯಾಯಾಲಯದ ಪರಿಶೀಲನೆಯಲ್ಲಿದೆ.

ಆ) ಟಿ. ನರಸೀಪರದಲ್ಲಿ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ (ಹಿರಿಯ ಶ್ರೇಣಿ)ವನ್ನು ಸ್ಥಾಪಿಸುವ ಬಗ್ಗೆ ಕರ್ನಾಟಕ ಉಚ್ಚ ನ್ಯಾಯಾಲಯದಿಂದ ಪ್ರಸ್ತಾವನೆ ಬಂದ ನಂತರ ಹಾಗೂ ಸಂಪನ್ಮೂಲದ ಲಭ್ಯತೆ ಮೇರೆಗೆ ಮಂಜೂರಾತಿ ನೀಡಲಾಗುವುದು.

ನಂಜಾಪುರದಿಂದ ಶ್ರೀರಂಗರಾಜ ಪುರದ ವರೆಗಿನ ರಸ್ತೆ ದುರಸ್ಥಿ

179 (237) ಶ್ರೀ ಎಸ್. ಕೃಷ್ಣಪ್ಪ (ಬನ್ನೂರು) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ